837(1193) ಶ್ರೀ ಶಂಕರಲಿಂಗೇಗೌಡ ಹೆಚ್ ಎಸ್ (ಚಾಮರಾಜ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರೆವಿನ್ಯೂ ನಿವೇಶನದಾರರು ಮನೆ ನಿವೇಶನ ಮಾರಾಟ ಮಾಡಿದರೆ ಉಪ ನೋಂಧಣಾಧಿಕಾರಿಗಳ ಕಛೇರಿಯಲ್ಲಿ ನೋಂದಣಿ ಮಾಡುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಕಷ್ಟದಲ್ಲಿರುವ ನಿವೇಶನದಾರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಸದರಿ ನಿವೇಶನದಾರರು ತಮ್ಮ ಆಸ್ತಿ ಪರಭಾರೆ ಮಾಡಲು ಅನುಕೂಲವಾಗುವಂತೆ ನೋಂದಣಿಗೆ ಅವಕಾಶ ಕಲ್ಪಿಸುವ ಬಗ್ಗೆ ಸರ್ಕಾರದ ನಿಲುವೇನು ?

ಈ) ನೋಂದಣಿಗೆ ಯಾವಾಗ ಅವಕಾಶ ಕಲ್ಪಿಸಲಾಗುವುದು ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಅ) ಕಂದಾಯ ನಿವೇಶನಗಳ ನೋಂದಣಿಯನ್ನು ನಿಷೇಧಿಸಿರುವುದಿಲ್ಲ ಆದ್ದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ರಾಜ್ಯದಲ್ಲಿ ಗಣಕೀಕೃತ ಉತಾರೆಗಳನ್ನು ಹಂಚುವ ನೆಮ್ಮದಿ ಯೋಜನೆ

840(1364) ಶ್ರೀ ಶಿವಾನಂದ ಎಸ್ ಪಾಟೀಲ್(ಬಸವನಬಾಗೇವಾಡಿ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯದಲ್ಲಿ ಗಣಕೀಕೃತ ಉತಾರೆಗಳನ್ನು ಹಂಚುವ ನೆಮ್ಮದಿ ಎಂಬ ಯೋಜನೆಯನ್ನು ಜಾರಿಗೆ ತರಲಾಗಿದೆಯೆ

ಆ) ರಾಜ್ಯದ ಯಾವ ಯಾವ ಕಡೆಗಳಲ್ಲಿ ನೆಮ್ಮದಿ ಯೋಜನೆಯನ್ನು ಪ್ರಾರಂಭಿಸಲಾಗಿದೆ

ಇ) ಬಸವನಬಾಗೇವಾಡಿ ತಾಲ್ಲೂಕಿನ ಮನಗೊಳಿ ಮತ್ತು ಮುತ್ತಗಿ ಗ್ರಾಮಗಳಲ್ಲಿ ನೆಮ್ಮದಿ ಯೋಜನೆಯನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರದ ಮುಂದೆ ಪ್ರಸ್ತಾವನೆಗಳು ಏನಾದರು ಇವೆಯೇ,

ಈ) ಹಾಗಿದ್ದಲ್ಲಿ, ಮನಗೂಳಿ ಮತ್ತು ಮುತ್ತಗೆ ಗ್ರಾಮಗಳಲ್ಲಿ ನೆಮ್ಮದಿ ಯೋಜನೆಗಳನ್ನು ಸ್ಥಾಪಿಸಲು ಸರ್ಕಾರ ಯಾವ ಕ್ರಮ ತೆಗೆದುಕೊಳ್ಳಲಾಗಿದೆ,

ಉ) ಯಾವ ಕಾಲಮಿತಿಯೊಳಗಾಗಿ ನೆಮ್ಮದಿ ಯೋಜನೆಯನ್ನು ಸದರಿ ಗ್ರಾಮಗಳಲ್ಲಿ ಆರಂಭಿಸಲಾಗುವುದು?